**<u>ಕರ್ನಾಟಕ ಸರ್ಕಾರ</u>**

**ಸಂಖ್ಯೆ:** ಸಿಒ 43 ಸಿಎಲ್ಎಂ 2013 (ಪಿ)

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 13.09.2013.

**<u>ಕರ್ನಾಟಕ ಸೌಹಾರ್ದ ಸಹಕಾರಿ (ತೊಡಕು ನಿವಾರಣೆಗಳು) ಎರಡನೇ ಆದೇಶ-2013</u>**

ಕರ್ನಾಟಕ ಸೌಹಾರ್ದ ಸಹಕಾರಿ ಅಧಿನಿಯಮ 1997 (2000ದ ಕರ್ನಾಟಕ ಅಧಿನಿಯಮ ಸಂಖ್ಯೆ 17) ಅನ್ನು ಕರ್ನಾಟಕ ಸೌಹಾರ್ದ ಸಹಕಾರಿ (ತಿದ್ದುಪಡಿ) ಅಧಿನಿಯಮ, 2012 (2013ರ ಕರ್ನಾಟಕ ಅಧಿನಿಯಮ ಸಂಖ್ಯೆ 04) (ಇನ್ನು ಮುಂದೆ ತಿದ್ದುಪಡಿ ಅಧಿನಿಯಮ ಎಂದು ಉಲ್ಲೇಖಿಸಿದೆ) ರಲ್ಲಿ ತಿದ್ದುಪಡಿ ಮಾಡಲಾಗಿರುತ್ತದೆ.

ಅದರಂತೆ, ಸದರಿ ತಿದ್ದುಪಡಿ ಅಧಿನಿಯಮದ, ಪ್ರಕರಣ 30ರ ಉಪ ಪ್ರಕರಣ (4)ರ ಅಡಿಯಲ್ಲಿ ಹಲವು ಸಹಕಾರಿಗಳು ಹೆಚ್ಚಿನ ಪ್ರಮಾಣದ ಸದಸ್ಯರನ್ನು ಹೊಂದಿದ್ದು, 2013ರಲ್ಲಿ ನಡೆಸಬೇಕಾದ ಸಾಮಾನ್ಯ ನಿಕಾಯದ ಸಭೆಗೆ ಅಗತ್ಯ ಕೋರಂ ಹೊಂದಿಸುವುದು ಕಷ್ಟಸಾಧ್ಯವಾಗಿದೆ.

ಆದುದರಿಂದ, ತಿದ್ದುಪಡಿ ಅಧಿನಿಯಮದ ಈ ಉಪಬಂಧಗಳನ್ನು ಜಾರಿಗೊಳಿಸಲು ತೊಡಕು ಉದ್ಭವಿಸಿದೆ. ಇಂತಹ ತೊಡಕನ್ನು ನಿವಾರಿಸಲು ಕರ್ನಾಟಕ ಸೌಹಾರ್ದ ಸಹಕಾರಿ (ತಿದ್ದುಪಡಿ) ಅಧಿನಿಯಮ 2012 (2013ರ ಕರ್ನಾಟಕ ಅಧಿನಿಯಮ 04)ರ 52ನೇ ಪ್ರಕರಣದಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಈ ಮೂಲಕ ಮುಂದಿನ ಆದೇಶವನ್ನು ಹೊರಡಿಸುವುದು ಅವಶ್ಯವೆಂದು ಭಾವಿಸಿದೆ, ಅಂದರೆ:-

**ಆದೇಶ**

1. **ಹೆಸರು ಮತ್ತು ಪ್ರಾರಂಭ.-** (1) ಈ ಆದೇಶವನ್ನು ಕರ್ನಾಟಕ ಸೌಹಾರ್ದ ಸಹಕಾರಿ (ತೊಡಕು ನಿವಾರಣೆಗಳು) ಎರಡನೇ ಆದೇಶ-2013 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

(3) ಈ ಆದೇಶವು ಒಂದು ಬಾರಿಗೆ ಮಾತ್ರ ಜಾರಿಯಲ್ಲಿರತಕ್ಕದ್ದು.

→

2. **ಸಾಮಾನ್ಯ ಸಭೆಯ ಕೋರಂ.-** ಕರ್ನಾಟಕ ಸೌಹಾರ್ದ ಸಹಕಾರಿ ಅಧಿನಿಯಮ 1997ರಲ್ಲಿ ಏನೇ ಒಳಗೊಂಡಿದ್ದರೂ, 2013ರಲ್ಲಿ ಜರುಗಿಸಬೇಕಾದ ಸೌಹಾರ್ದ ಸಹಕಾರಿಗಳ ಸಾಮಾನ್ಯ ನಿಕಾಯದ ಒಟ್ಟು ಮತದಾನ ಹಕ್ಕುಳ್ಳ ಸದಸ್ಯರ ಕೋರಂ ಸಹಕಾರಿಗಳ ಉಪವಿಧಿಗಳಲ್ಲಿ ನಿಗದಿಪಡಿಸಿರುವಂತೆ ಇರತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಹೆಚ್.ಎಸ್. ನಾಗರಾಜಯ್ಯ)
ವಿಶೇಷ ಕರ್ತವ್ಯಾಧಿಕಾರಿ ಹಾಗೂ ಪದನಿಮಿತ್ತ
ಸರ್ಕಾರದ ಜಂಟಿ ಕಾರ್ಯದರ್ಶಿ,
ಸಹಕಾರ ಇಲಾಖೆ.

**ಇವರಿಗೆ :**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು ಇವರಿಗೆ ಕರ್ನಾಟಕ ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ, ಅದರ 600 ಪ್ರತಿಗಳನ್ನು ಒದಗಿಸಲು ಕೋರಿದೆ.

**ಪ್ರತಿಗಳು :**

1. ಸನ್ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
2. ಮಾನ್ಯ ಸಹಕಾರ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
3. ಸರ್ಕಾರದ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
5. ಸರ್ಕಾರದ ಕಾರ್ಯದರ್ಶಿ, ಸಂಸದೀಯ ವ್ಯವಹಾರ ಮತ್ತು ಶಾಸನ ರಚನಾ ಇಲಾಖೆ, ವಿಧಾನಸೌಧ, ಬೆಂಗಳೂರು
6. ಸಹಕಾರ ಸಂಘಗಳ ನಿಬಂಧಕರು, ನಂ.1, ಅಲಿ ಆಸ್ಕರ್ ರಸ್ತೆ, ಬೆಂಗಳೂರು-52
7. ಸಹಕಾರ ಲೆಕ್ಕಪರಿಶೋಧನಾ ನಿರ್ದೇಶಕರು, ಶಂಕರಮಠ ರಸ್ತೆ, ಬಸವನಗುಡಿ, ಬೆಂಗಳೂರು-04
8. ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ರಾಜ್ಯ ಸಹಕಾರಿ ಅಪೆಕ್ಸ್ ಬ್ಯಾಂಕ್ ನಿ., ಚಾಮರಾಜಪೇಟೆ, ಬೆಂಗಳೂರು-18
9. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರ ನಿಯಮಿತ, ರಾಜಾಜಿನಗರ, ಬೆಂಗಳೂರು
10. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಹಕಾರ ಇಲಾಖೆ, ಬೆಂಗಳೂರು
11. ಸರ್ಕಾರದ ಅಧೀನ ಕಾರ್ಯದರ್ಶಿ-3, ಸಹಕಾರ ಇಲಾಖೆ, ಬೆಂಗಳೂರು
12. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.

:ಅಶಾ/13913